**ಆಯುಕ್ತರು**
ಕಾರ್ಮಿಕ ಇಲಾಖೆ

ಕರ್ನಾಟಕ ಸರ್ಕಾರ

"ಕಾರ್ಮಿಕ ಭವನ", ಐಟಿಐ ಕಾಲೇಜ್ ಕಾಂಪೌಂಡ್,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-560029.
ಕಛೇರಿ:080 2975 3078
ಇಮೇಲ್ : labour.commissioner42@gmail.com

**ಸಂಖ್ಯೆ:**ಕೆಎಸ್‌ಸಿಎಲ್‌ಇಪಿಎಸ್/ಸಿಎಲ್-05/ಸಿಆರ್-05/2023-24 **ದಿನಾಂಕ:**21 /08/2023

## : ಕಛೇರಿ ಜ್ಞಾಪನಾ :

**ವಿಷಯ:** 2023-24ನೇ ಸಾಲಿಗೆ ಬಾಲಕಾರ್ಮಿಕರ ಪುನರ್ವಸತಿ ಯೋಜನೆಯಡಿ ಹಂಚಿಕೆಯಾದ ಆಯವ್ಯಯದ ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್.ಸಿ.ಎಸ್.ಪಿ) ಹಾಗೂ ಗಿರಿಜನ ಉಪಯೋಜನೆ(ಟಿ.ಎಸ್.ಪಿ)ಯಡಿ ಬಿಡುಗಡೆಯಾದ ಅನುದಾನವನ್ನು ಬಳಕೆ ಮಾಡುವ ಕುರಿತು.

**ಉಲ್ಲೇಖ:**
1. ಸನ್ಮಾನ್ಯ ಮುಖ್ಯಮಂತ್ರಿಗಳು ಮತ್ತು ಅಧ್ಯಕ್ಷರು, ರಾಜ್ಯ ಅನುಸೂಚಿತ ಜಾತಿಗಳ/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಇವರ ಅಧ್ಯಕ್ಷತೆಯಲ್ಲಿ 2023-24ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕ್ರಿಯಾ ಯೋಜನೆಯ ಕುರಿತು ದಿನಾಂಕ;31/07/2023ರಂದು ನಡೆದ ಸಭೆಯ ನಡವಳಿ.
2. ಈ ಕಛೇರಿಯ ಪತ್ರ ಸಂಖ್ಯೆ:ಕೆಎಸ್‌ಸಿಎಲ್‌ಇಪಿಎಸ್/ಸಿಎಲ್-05/ಸಿಆರ್-10/2023-24, ದಿನಾಂಕ:08/05/2023
3. ಈ ಕಛೇರಿಯ ಪತ್ರ ಸಂಖ್ಯೆ:ಕೆಎಸ್‌ಸಿಎಲ್‌ಇಪಿಎಸ್/ಸಿಎಲ್-05/ಸಿಆರ್-10/2023-24, ದಿನಾಂಕ:07/08/2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖ(1)ರಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ:31/07/2023 ರಂದು ನಡೆದ ಅನುಸೂಚಿತ ಜಾತಿಗಳು/ ಅನುಸೂಚಿತ ಬುಡಕಟ್ಟುಗಳ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯಲ್ಲಿ ಅನುಮೋದಿಸಿದ 2023-24ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕ್ರಿಯಾ ಯೋಜನೆಯನ್ವಯ 2023-24ನೇ ಸಾಲಿಗೆ ಬಾಲಕಾರ್ಮಿಕರ ಪುನರ್ವಸತಿ ಯೋಜನೆಯಡಿ ಹಂಚಿಕೆಯಾದ ಆಯವ್ಯಯದ ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್.ಎ.ಎಸ್.ಪಿ) ಹಾಗೂ ಗಿರಿಜನ ಉಪಯೋಜನೆ (ಟಿ.ಎಸ್.ಪಿ)ಯಡಿ ಕಾರ್ಮಿಕ ಇಲಾಖೆಯ ಬಾಲಕಾರ್ಮಿಕರ ಕಾರ್ಯಕ್ರಮಕ್ಕೆ ಒದಗಿಸಿರುವ ಅನುದಾನವನ್ನು ಖರ್ಚು ಮಾಡುವ ಕುರಿತಾಗಿ ನಿರ್ದೇಶನಗಳನ್ನು ನೀಡಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತವೆ;

1. ಎಸ್.ಸಿ/ಎಸ್.ಟಿ ಜನಾಂಗದ ಬಾಲ ಹಾಗೂ ಕಿಶೋರ ಕಾರ್ಮಿಕರ ಮನೆಗಳಿಗೆ ಆಹಾರ ಧಾನ್ಯ, ಸಮವಸ್ತ್ರ, ನೋಟ್ ಪುಸ್ತಕ, ಲೇಖನ ಸಾಮಗ್ರಿಗಳನ್ನು ಹಾಗೂ ಇನ್ನಿತರೆ ವಸುಗಳನ್ನು ಕಿಟ್ ರೂಪದಲ್ಲಿ ಸರಬರಾಜು ಮಾಡುವುದು(50%).

2. ಎಸ್.ಸಿ/ಎಸ್.ಟಿ ಕಾಲೋನಿಗಳಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಬಗ್ಗೆ ಜನಜಾಗೃತಿಯನ್ನು ಮೂಡಿಸುವುದು(50%)

ಮೇಲ್ಕಂಡ ನಿರ್ದೇಶನದನುಸಾರ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಸಂದರ್ಭದಲ್ಲಿ ಈ ಕೆಳಕಂಡ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಲು ಕೋರಿದೆ;

1. ಬಾಲ ಹಾಗೂ ಕಿಶೋರ ಕಾರ್ಮಿಕರ ನಿರೀಕ್ಷಿತ-ಅನಿರೀಕ್ಷಿತ ದಾಳಿ, ತಪಾಸಣೆ, ಸಮೀಕ್ಷೆ ಹಾಗೂ ದೂರು ಆಧಾರಿತ ಪ್ರಕರಣಗಳಲ್ಲಿ ಎಸ್.ಸಿ/ಎಸ್.ಟಿ ಜನಾಂಗಕ್ಕೆ ಸೇರಿದ ಬಾಲಕಾರ್ಮಿಕರು ಹಾಗೂ ಕಿಶೋರ ಕಾರ್ಮಿಕರು ಪತ್ತೆಯಾದ ಮಕ್ಕಳಿಗೆ 50% ಅನುದಾನವನ್ನು ಆಹಾರ ಧಾನ್ಯ, ಸಮವಸ್ತ್ರ, ನೋಟ್ ಪುಸ್ತಕ, ಲೇಖನ ಸಾಮಗ್ರಿ ಹಾಗೂ ಇನ್ನಿತರೇ ವಸ್ತುಗಳನ್ನು ಕಿಟ್ ರೂಪದಲ್ಲಿ ಎಸ್.ಸಿ/ಎಸ್.ಟಿ ಜನಾಂಗದ ಬಾಲ ಹಾಗೂ ಕಿಶೋರ ಕಾರ್ಮಿಕರ ಮನೆಗಳಿಗೆ ಸರಬರಾಜು ಮಾಡುವುದು.

2. ಎಸ್.ಸಿ/ಎಸ್.ಟಿ ಜನಾಂಗದ ಬಾಲ ಹಾಗೂ ಕಿಶೋರ ಕಾರ್ಮಿಕರ ಮನೆಗಳಿಗೆ ಆಹಾರ ಧಾನ್ಯ, ಸಮವಸ್ತ್ರ, ನೋಟ್ ಪುಸ್ತಕ, ಲೇಖನ ಸಾಮಗ್ರಿ ಹಾಗೂ ಇನ್ನಿತರೇ ವಸ್ತುಗಳನ್ನು ಕಿಟ್ ರೂಪದಲ್ಲಿ ಸರಬರಾಜು ಮಾಡುವ ಸಂದರ್ಭದಲ್ಲಿ ಅನುದಾನವನ್ನು ಎಸ್.ಸಿ/ಎಸ್.ಟಿ ಜನಾಂಗದ ಬಾಲ ಹಾಗೂ ಕಿಶೋರ ಕಾರ್ಮಿಕರ/ಫಲಾನುಭವಿಯ ಆಧಾರ್ ಸಂಖ್ಯೆ, ವಾಸಸ್ಥಳದ ಸಂಪೂರ್ಣ ವಿಳಾಸ, ಜನ್ಮ ದಿನಾಂಕ, ಲಿಂಗ, ತಂದೆ-ತಾಯಿ ಹೆಸರು, ಫಲಾನುಭವಿಗಳಿಗೆ ನೀಡಲಾದ ಮೊತ್ತದ ಲಾಭದ ಸ್ವರೂಪ(Nature of benefit)ದ ವಿವರ, ಭಾವಚಿತ್ರ, ಪಡಿತರ ಚೀಟಿಯ ವಿವರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಸಂಖ್ಯೆಯ ವಿವರ, ಫಲಾನುಭವಿಯ ವಿಧಾನ ಸಭಾ ಕ್ಷೇತ್ರದ ಮತ್ತು ಲೋಕಸಭಾ ಕ್ಷೇತ್ರದ ವಿವರ, ಬ್ಯಾಂಕ್ ಖಾತೆಯ ಸಂಪೂರ್ಣ ಮಾಹಿತಿ ಇತ್ಯಾದಿ ಒಳಗೊಂಡ ಮಾಹಿತಿಯನ್ನು ಸಂಗ್ರಹಿಸುವುದು ಮತ್ತು ಸಮಾಜ ಕಲ್ಯಾಣ ಇಲಾಖೆಯ, SCSP-TSP ಅಂತರ್ಜಾಲದ Monitoring App ನಲ್ಲಿ ಪ್ರತಿ ಮಾಹೆಯಾನ ನಮೂದಿಸುವುದು ಹಾಗೂ ಕೇಂದ್ರ ಕಛೇರಿಗೆ ಮಾಹಿತಿಯನ್ನು ಸಲ್ಲಿಸುವುದು.

3. ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆ ಲೆಕ್ಕಶೀರ್ಷಿಕೆಯಡಿ ಉಳಿಕೆಯಾಗುವ ಶೇ.50% ರಷ್ಟು ಅನುದಾನದಲ್ಲಿ, ಎಸ್.ಸಿ/ಎಸ್.ಟಿ ಕಾಲೋನಿಗಳಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಬಗ್ಗೆ ಜನಜಾಗೃತಿ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವುದು. ಎಸ್.ಸಿ/ಎಸ್.ಟಿ ಜನಾಂಗದವರು ವಾಸಿಸುವ ಪ್ರದೇಶಗಳಲ್ಲಿ ಮಕ್ಕಳನ್ನು ದುಡಿಮೆಗೆ ಕಳುಹಿಸದೆ ಶಾಲೆಗೆ ಕಳುಹಿಸುವ ಬಗ್ಗೆ ಜಿಲ್ಲೆಗಳಲ್ಲಿರುವ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗಳ ಮೂಲಕ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಸರ್ಕಾರೇತರ ಸಂಸ್ಥೆಗಳು ಹಾಗೂ ಎಲ್ಲಾ ಭಾಗೀದಾರರ ಸಹಯೋಗದೊಂದಿಗೆ ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಕಾನೂನು ಅರಿವು-ನೆರವು ಕಾರ್ಯಕ್ರಮಗಳನ್ನು ಆಯೋಜನೆ ಮಾಡುವುದು.

4. ಸನ್ಮಾನ್ಯ ಮುಖ್ಯಮಂತ್ರಿಗಳು ಮತ್ತು ಅಧ್ಯಕ್ಷರು, ರಾಜ್ಯ ಅನುಸೂಚಿತ ಜಾತಿಗಳ/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ ಇವರ ಅಧ್ಯಕ್ಷತೆಯಲ್ಲಿ 2023-24ನೇ ಸಾಲಿನ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕ್ರಿಯಾ ಯೋಜನೆಯ ಕುರಿತು ದಿನಾಂಕ;31/07/2023ರಂದು ನಡೆದ ಸಭೆಯ ನಡವಳಿಯ ಪ್ರಮುಖ ಸೂಚನೆಗಳ ಕ್ರಮ ಸಂಖ್ಯೆ **12ರಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು 100% ವೆಚ್ಚ ಮಾಡಿ ಅರ್ಹ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಮತ್ತು ಕರ್ತವ್ಯಲೋಪ ಮತ್ತು ನಿರ್ಲಕ್ಷ್ಯತೆ ತೋರುವಂತಹ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಶಿಸ್ತುಕ್ರಮ ಕೈಗೊಳ್ಳಲಾಗುವುದು** ಎಂದು ತಿಳಿಸಿರುತ್ತಾರೆ. ಆದ್ದರಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಲೆಕ್ಕ ಶೀರ್ಷಿಕೆಯಡಿ ಬಿಡುಗಡೆಯಾಗುವ ಅನುದಾನವನ್ನು ಮೇಲ್ಕಂಡ ನಿರ್ದೇಶನದನ್ವಯ ಸಂಪೂರ್ಣವಾಗಿ 100% ಬಳಕೆ ಮಾಡುವುದು.

5. ಕರ್ನಾಟಕ ಅನುಸೂಚಿತ ಜಾತಿಗಳ ಉಪ ಹಂಚಿಕೆ ಮತ್ತು ಬುಡಕಟ್ಟು ಉಪ ಹಂಚಿಕೆ(ಯೋಜನೆ ರೂಪಿಸುವುದು, ಆರ್ಥಿಕ ಸಂಪನ್ಮೂಲಗಳ ಹಂಚಿಕೆ ಮತ್ತು ಬಳಕೆ)ಅಧಿನಿಯಮ, 2013 ಮತ್ತು ನಿಯಮಗಳು, 2017ಗಳನ್ನು ಕಡ್ಡಾಯವಾಗಿ ಪಾಲಿಸುವುದು.

6. ಸಮಾಜ ಕಲ್ಯಾಣ ಇಲಾಖೆಯಿಂದ ಕರ್ನಾಟಕ ಅನುಸೂಚಿತ ಜಾತಿಗಳ ಉಪಹಂಚಿಕೆ ಮತ್ತು ಬುಡಕಟ್ಟು ಉಪಹಂಚಿಕೆಯ ಪ್ರಗತಿ ಕುರಿತು ಪ್ರತಿ ಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಸುತ್ತಿರುವುದರಿಂದ ಸಭೆಗೂ ಹಾಗೂ ಸರ್ಕಾರಕ್ಕೂ ವರದಿಯನ್ನು ಸಲ್ಲಿಸಬೇಕಾಗಿರುತ್ತದೆ. ಈ ವಿಷಯವನ್ನು ಅತ್ಯಾಧ್ಯತೆಯೆಂದು ಪರಿಗಣಿಸಿ ಮೇಲ್ಕಂಡ ಪ್ರತಿಯೊಂದು ಕಂಡಿಕವಾರು ಅಂಶಗಳಿಗೆ ಕ್ರಮಗಳನ್ನು ಕಾಲವಿಳಂಬಕ್ಕೆ ಅವಕಾಶವಿಲ್ಲದಂತೆ, ನಿಯಮಾನುಸಾರ ಅಗತ್ಯ ಕ್ರಮಗಳನ್ನು ಕೈಗೊಂಡು, ಕೈಗೊಂಡ ಕ್ರಮಗಳ ಸಂಪೂರ್ಣ ವರದಿಯನ್ನು ಜರೂರಾಗಿ ಈ ಕಛೇರಿಗೆ ಸಲ್ಲಿಸಲು ಈ ಮೂಲಕ ಕೋರಿದೆ.

7. ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್.ಸಿ.ಎಸ್.ಪಿ) ಅನುದಾನವನ್ನು ಎಸ್.ಸಿ. ಬಾಲ ಹಾಗೂ ಕಿಶೋರ ಕಾರ್ಮಿಕರಿಗೆ ಮತ್ತು ಗಿರಿಜನ ಉಪಯೋಜನೆ(ಟಿ.ಎಸ್.ಪಿ) ಅನದಾನವನ್ನು ಎಸ್.ಟಿ. ಬಾಲ ಹಾಗೂ ಕಿಶೋರ ಕಾರ್ಮಿಕರಿಗೆ ಕಡ್ಡಾಯವಾಗಿ ಬಳಕೆ ಮಾಡುವುದು, ಎಸ್.ಸಿ.ಎಸ್.ಪಿ ಅನುದಾನವನ್ನು ಟಿ.ಎಸ್.ಪಿ ಗೆ ವರ್ಗಾಹಿಸಲು/ಬಳಕೆ ಮಾಡಲು, ಟಿ.ಎಸ್.ಪಿ ಅನುದಾನವನ್ನು ಎಸ್.ಸಿ.ಎಸ್.ಪಿ ಗೆ ವರ್ಗಾಹಿಸಲು/ಬಳಕೆ ಮಾಡಲು ಅವಕಾಶವಿರುವುದಿಲ್ಲ. ಅನುದಾನವನ್ನು ನಿಯಮಾನುಸಾರ ಲೆಕ್ಕ ಶೀರ್ಷಿಕೆವಾರು ಬಳಕೆ ಮಾಡುವುದು.

8. ಲೆಕ್ಕ ಶೀರ್ಷಿಕೆವಾರು ಹಣ ಬಳಕೆ ಪ್ರಮಾಣ ಪತ್ರವನ್ನು ಹಾಗೂ ಸಂಪೂರ್ಣ ವಿವರಗಳನ್ನು ಕೇಂದ್ರ ಕಛೇರಿಗೆ ಸಲ್ಲಿಸುವುದು ಹಾಗೂ 2023-24 ನೇ ಸಾಲಿನಲ್ಲಿ SCSP/TSP ಲೆಕ್ಕ ಶೀರ್ಷಿಕೆಯಡಿ ಅನುದಾನ ಬಳಕೆ ಕುರಿತು ಫಲಾನುಭವಿವಾರು ಮಾಹಿತಿಯನ್ನು ಈ ಪತ್ರಕ್ಕೆ ಲಗತ್ತಿಸಿರುವ ನಮೂನೆಗಳಲ್ಲಿ ಪ್ರತಿ ತಿಂಗಳು 3ನೇ ತಾರೀಖಿನೊಳಗಾಗಿ ಕೇಂದ್ರ ಕಛೇರಿಗೆ ಸಲ್ಲಿಸಲು ಈ ಮೂಲಕ ಕೋರಿದೆ.

Gopalk

**ಆಯುಕ್ತರು,**
**ಕಾರ್ಮಿಕ ಇಲಾಖೆ**

**ಇವರಿಗೆ,**

1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
2. ಎಲ್ಲಾ ಉಪ ಕಾರ್ಮಿಕ ಆಯುಕ್ತರು
3. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು
4. ಎಲ್ಲಾ ಕಾರ್ಮಿಕ ಅಧಿಕಾರಿಗಳು